ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಬೆಳಗಾವಿ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರ ಕೊರತೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

969 (1192) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯಲ್ಲಿನ ಹಲವಾರು ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಸರ್ಕಾರಿ ಆಸ್ಪತ್ರೆಗಳೆಷ್ಟು ; ಸದರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ವಿವಿಧ ವೃಂದದ ಹಾಗೂ ವಿವಿಧ ವಿಭಾಗದ ವೈದ್ಯರುಗಳ ಹುದ್ದೆಗಳೆಷ್ಟು ;

(ಈ) ಜಿಲ್ಲೆಯ ಯಾವ ಯಾವ ಆಸ್ಪತ್ರೆಗಳಲ್ಲಿ ಯಾವ ಯಾವ ವೃಂದದ ವೈದ್ಯರುಗಳ ಹುದ್ದೆಗಳು ಖಾಲಿ ಇವೆ ; (ವಿವರ ಒದಗಿಸುವುದು)

(ಉ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?